# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1264 |
| ಮಾನ್ಯ ಸದಸ್ಯರ ಹೆಸರು | ಶ್ರೀ ಕೆ.ಪ್ರತಾಪಸಿಂಹ ನಾಯಕ್ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 22 /08/2025 |
| ಉತ್ತರಿಸುವವರು | ಮಾನ್ಯ ಕಾರ್ಮಿಕ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕರ್ನಾಟಕ ರಾಜ್ಯ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯಲ್ಲಿ ಕಾರ್ಮಿಕರ ಮಕ್ಕಳ 2022-23ನೇ ಸಾಲಿನ ವಿದ್ಯಾರ್ಥಿ ವೇತನದ ಅರ್ಜಿಯ ಪರಿಶೀಲನೆಯ ಸಂದರ್ಭದಲ್ಲಿ ನರೇಗಾ ಜಾಬ್ ಕಾರ್ಡ್ ಹೊಂದಿರುವ ಕಾರ್ಮಿಕರ ಮಕ್ಕಳ ವಿದ್ಯಾರ್ಥಿ ವೇತನದ ಅರ್ಜಿಯನ್ನು ತಿರಸ್ಕರಿಸುತ್ತಿರುವುದರಿಂದ ನೈಜ ಕಾರ್ಮಿಕರ ಮಕ್ಕಳಿಗೆ ತೀವ್ರ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | 2022-23ನೇ ಸಾಲಿನ ಶೈಕ್ಷಣಿಕ ಸಹಾಯ ಧನ ಕೋರಿ ಅರ್ಜಿ ಸಲ್ಲಿಸಿರುವ ನರೇಗಾ ಜಾಬ್ ಕಾರ್ಡ್ ಹೊಂದಿರುವ ಕಾರ್ಮಿಕರ ವಿದ್ಯಾರ್ಥಿ ವೇತನದ ಅರ್ಜಿಗಳನ್ನು ತಿರಸ್ಕರಿಸಿರುವುದಿಲ್ಲ. ಮಂಜೂರಾತಿಗೆ ಮೊದಲು ಸೂಕ್ತ ಪರಿಶೀಲನೆ ನಡೆಸಿ, ಅರ್ಹ ನೋಂದಾಯಿತ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕ ಫಲಾನುಭವಿಗಳ ಮಕ್ಕಳಿಗೆ ವಿತರಿಸಲು ಕ್ರಮ ಕೈಗೊಳ್ಳಲಾಗಿರುತ್ತದೆ. |
| ಆ) | ಬಂದಿದ್ದಲ್ಲಿ, ಹಳ್ಳಿಗಳಲ್ಲಿ ನೈಜ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರೂ ಕೂಡ ನರೇಗಾ ಜಾಬ್ ಕಾರ್ಡ್ ಹೊಂದಿದ್ದು, ಕುಟುಂಬ ಐಡಿಯಲ್ಲಿ ಉದ್ಯೋಗ ನಮೂದಾಗಿರುವ ಬಗ್ಗೆ ಬಹುತೇಕ ಕಾರ್ಮಿಕರಿಗೆ ತಿಳುವಳಿಕೆಯೇ ಇಲ್ಲದಿರುವುದರಿಂದ ನರೇಗಾ ಜಾಬ್ ಕಾರ್ಡ್ ಹೊಂದಿರುವ ಕಾರಣಕ್ಕೆ ಅವರ ಮಕ್ಕಳ ವಿದ್ಯಾರ್ಥಿ ವೇತನದ ಅರ್ಜಿಯನ್ನು ತಿರಸ್ಕರಿಸುವ ಬದಲು ಕಾರ್ಮಿಕರ ನೈಜತೆಯನ್ನು ಪರಿಶೀಲಿಸಲು ಆಯಾಯ ತಾಲ್ಲೂಕಿನ ಕಾರ್ಮಿಕ ಅಧಿಕಾರಿಗಳಿಗೆ ಅವಕಾಶ ನೀಡಲು ಸರ್ಕಾರ ಈ ಕೂಡಲೇ ಸೂಕ್ತ ಕ್ರಮವಹಿಸುವುದೇ; | 2022-23 ನೇ ಸಾಲಿನ ಶೈಕ್ಷಣಿಕ ಸಹಾಯ ಧನಕ್ಕೆ ಎಸ್.ಎಸ್.ಪಿ ತಂತ್ರಾಂಶದಲ್ಲಿ ಸಲ್ಲಿಕೆ ಯಾಗಿರುವ ಅರ್ಜಿಗಳನ್ನು ಕುಟುಂಬ ತಂತ್ರಾಂಶದೊಂದಿಗೆ ಪರಿಶೀಲಿಸಿದಾಗ ಅರ್ಜಿದಾರರ ವೃತ್ತಿಯು ನರೇಗಾ ಎಂದು ನಮೂದಾಗಿರುವ 2022-23 ನೇ ಸಾಲಿನ 1,57,776 ಅರ್ಜಿಗಳನ್ನು ಸೂಕ್ತ ಪರಿಶೀಲನೆಗಾಗಿ ಜಿಲ್ಲಾವಾರು ಕಾರ್ಮಿಕ ಅಧಿಕಾರಿಗಳಿಗೆ ಕಳುಹಿಸಲಾಗಿರುತ್ತದೆ. ಈ ಎಲ್ಲಾ ಅರ್ಜಿಗಳನ್ನು ಕ್ಷೇತ್ರ ಮಟ್ಟದಲ್ಲಿ ಪರಿಶೀಲಿಸಿ ಅರ್ಜಿದಾರ ಫಲಾನುಭವಿಗಳ ವೃತ್ತಿಯು ಕಟ್ಟಡ ಕಾರ್ಮಿಕ ಎಂದು ಕಂಡು ಬರುವ ಎಲ್ಲಾ ಅರ್ಜಿಗಳನ್ನು ಅನುಮೋದಿಸಲು ಸೂಚಿಸಲಾಗಿರುತ್ತದೆ. ಆದುದರಿಂದ ಪರಿಶೀಲನೆಯ ಸಮಯದಲ್ಲಿ ಕಟ್ಟಡ ಕಾರ್ಮಿಕರೆಂದು ಕಂಡು ಬರುವ ಎಲ್ಲಾ ನೋಂದಾಯಿತ ಅರ್ಜಿದಾರ ಫಲಾನುಭವಿಗಳ ಮಕ್ಕಳಿಗೆ ಶೈಕ್ಷಣಿಕ ಸಹಾಯ ಧನವನ್ನು ಮಂಜೂರು ಮಾಡಲಾಗುತ್ತಿದೆ. |

| | | |
|---|---|---|
| ಇ) | ಯಾವ ಕಾಲಮಿತಿಯೊಳಗೆ ಈ ಕುರಿತು ಆದೇಶ ಹೊರಡಿಸಲಾಗುವುದು? | ಶೈಕ್ಷಣಿಕ ಸಹಾಯ ಧನಕ್ಕೆ ಅರ್ಜಿ ಸಲ್ಲಿಸಿರುವ ನೋಂದಾಯಿತ ಕಟ್ಟಡ ಕಾರ್ಮಿಕರ ವೃತ್ತಿಯು ಕುಟುಂಬ ತಂತ್ರಾಂಶದಲ್ಲಿ ನರೇಗಾ ವೃತ್ತಿ ಎಂದು ನಮೂದಾಗಿರುವ ನೋಂದಾಯಿತ ಕಟ್ಟಡ ಕಾರ್ಮಿಕರ ವೃತ್ತಿಯನ್ನು ಕ್ಷೇತ್ರ ಮಟ್ಟದಲ್ಲಿ ಪರಿಶೀಲಿಸಿ, ಕಟ್ಟಡ ಕಾರ್ಮಿಕರೆಂದು ಕಂಡು ಬರುವ ಎಲ್ಲಾ ಅರ್ಜಿಗಳನ್ನು ತ್ವರಿತವಾಗಿ ವಿಲೇ ಮಾಡಲಾಗುತ್ತಿದೆ. |

**ಕಾಇ 331 ಎಲ್‌ಇಟಿ 2025**

**(ಸಂತೋಷ್ ಎಸ್ ಲಾಡ್)**
**ಕಾರ್ಮಿಕ ಸಚಿವರು**